Azadi Ka Amrit Mahotsav

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,**

**ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು–560001**

ಸಂಖ್ಯೆ: ಸಿ3(7) ಪ್ರಾಶಾಶಿ ಶಿ.ನಿಯೋಜನೆ-01/2022-23 ದಿನಾಂಕ: 08/04/2022

**: ಅಧಿಕೃತ ಜ್ಞಾಪನ:**

ವಿಷಯ: ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ನಿಯೋಜನೆಯನ್ನು ರದ್ದುಪಡಿಸುವ ಬಗ್ಗೆ:

ಉಲ್ಲೇಖ: ಈ ಕಚೇರಿ ಜ್ಞಾಪನ ಸಂಖ್ಯೆ: ಸಿ2(3) ದೂರು/05/2019-20 ದಿನಾಂಕ: 24/06/2021

---****---

ವಿಷಯಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಉಪನಿರ್ದೇಶಕರುಗಳು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಮಕ್ಕಳ ಶೈಕ್ಷಣಿಕ ಹಿತಾಸಕ್ತಿಯನ್ನು ಗಮನದಲ್ಲಿರಿಸದೇ ನಿಯಮಬಾಹಿರವಾಗಿ ಶಿಕ್ಷಕರುಗಳನ್ನು ನಿಯಮಗಳನ್ನು ಉಲ್ಲಂಘಿಸಿ ನಿಯೋಜನೆ ಮಾಡಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆ/ತಾಲ್ಲೂಕುಗಳಲ್ಲಿ ನಿಯೋಜನೆಯ ಮೇಲೆ ಕಛೇರಿ/ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲು ಸೂಚಿಸಲಾಗಿತ್ತು. ಆದರೆ ಇದುವರೆಗೂ ನಿಯೋಜನೆಯ ಮೇಲೆ ಸದರಿ ಶಿಕ್ಷಕರುಗಳು ಮುಂದುವರೆಯುತ್ತಿರುವುದು ವಿಷಾಧನೀಯ. ಇಲಾಖೆಯಿಂದ ಸ್ಪಷ್ಟ ಸೂಚನೆಗಳು ಇದ್ದಾಗ್ಯೂ ಸಹಾ ಕೆಲವು ಶಿಕ್ಷಕರನ್ನು ಅದೇ ಶಾಲೆಯಲ್ಲಿ ನಿಯಮಬಾಹಿರವಾಗಿ ಮುಂದುವರೆಯಲು ಅವಕಾಶ ನೀಡುವುದರ ಮೂಲಕ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ಮೇಲಾಧಿಕಾರಿಗಳ ಆದೇಶವನ್ನು ಪಾಲಿಸುವಲ್ಲಿ ವಿಫಲರಾಗಿರುವ ಅಂಶವನ್ನು ಬಹಳ ಗಂಭೀರವಾಗಿ ಪರಿಗಣಿಸಿದೆ.

ಆದ್ದರಿಂದ ಪ್ರಸ್ತುತ ಹೆಚ್ಚುವರಿ ಶಿಕ್ಷಕರ ಮರುಹೊಂದಾಣಿಕೆ ಪ್ರಕ್ರಿಯೆ ಚಾಲ್ತಿಯಲ್ಲಿರುವುದರಿಂದ ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಆದೇಶಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅಂತಹ ಶಿಕ್ಷಕರುಗಳನ್ನು ಕೂಡಲೆ ಶಾಲಾ ಕರ್ತವ್ಯದಿಂದ ಬಿಡುಗಡೆಗೊಳಿಸತಕ್ಕದ್ದು ಹಾಗೂ ಬಿಡುಗಡೆಗೊಂಡ ಶಿಕ್ಷಕರು ದಿನಾಂಕ: 09/04/2022 ರೊಳಗೆ ಮೂಲ ಶಾಲೆಯಲ್ಲಿ ಕಡ್ಡಾಯವಾಗಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಒಂದು ವೇಳೆ ನಿಗಧಿತ ದಿನಾಂಕದೊಳಗೆ ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ ಅಂತಹ ಶಿಕ್ಷಕರನ್ನು ಅನಧಿಕೃತ ಗೈರು ಹಾಜರಿ ಪ್ರಕರಣ ಎಂದು ಪರಿಗಣಿಸಿ ಶಿಸ್ತು ಕ್ರಮ ಜರುಗಿಸಲು ತಿಳಿಸಿದೆ ಹಾಗೂ ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗದ ಶಿಕ್ಷಕರ ವೇತನವನ್ನು ಪಾವತಿಸದೇ ತಡೆಹಿಡಿಯಲು ಸೂಚಿಸಿದೆ.

ಈಗಾಗಲೇ ಉಲ್ಲೇಖಿತ ಪತ್ರದಲ್ಲಿ ಶಿಕ್ಷಕರ ನಿಯೋಜನೆಯನ್ನು ರದ್ದುಪಡಿಸುವಂತೆ ಸ್ಪಷ್ಟ ಸೂಚನೆಗಳನ್ನು ನೀಡಲಾಗಿದ್ದರೂ ಸಹಾ ಶಿಕ್ಷಕರುಗಳಿಗೆ ನಿಯೋಜನೆಯ ಮೇಲೆ ಮುಂದುವರೆಯಲು ಯಾವ ಉದ್ದೇಶಕ್ಕಾಗಿ ಅವಕಾಶ ನೀಡಲಾಗಿದೆ ಎಂಬ ಬಗ್ಗೆ ವಿವರಣೆ ನೀಡತಕ್ಕದ್ದು ಹಾಗೂ ಶಿಕ್ಷಕರನ್ನು ಬಿಡುಗಡೆಗೊಳಿಸಲಾಗಿರುವ ಹಾಗೂ ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗಿರುವ ಶಿಕ್ಷಕರ ಜಿಲ್ಲಾವಾರು ಪಟ್ಟಿಯನ್ನು ನಮೂನೆಯಲ್ಲಿರುವಂತೆ ದಿನಾಂಕ: 13/04/2022ರ ಒಳಗಾಗಿ ಈ ಕಛೇರಿಗೆ ಕಳುಹಿಸಲು ತಿಳಿಸಿದೆ. ತಪ್ಪಿದಲ್ಲಿ ಅಂತಹ ಉಪನಿರ್ದೇಶಕರು(ಆಡಳಿತ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಸಂಬಂಧಿಸಿದ ಸಿಬ್ಬಂಧಿಗಳ ವಿರುದ್ಧ ಕರ್ತವ್ಯ ನಿರ್ಲಕ್ಷತೆ ಎಂದು ಪರಿಗಣಿಸಿ ಶಿಸ್ತು ಕ್ರಮ ಜರುಗಿಸಲಾಗುವುದು.

ಡಾ॥ ವಿಶಾಲ್. ಆರ್ ಭಾ.ಆ.ಸೇ.
ಆಯುಕ್ತರು
ಸಾ.ಶಿ.ಇ. ಬೆಂಗಳೂರು.

ಗೆ.

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ತುರ್ತು ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಉಪನಿರ್ದೇಶಕರ ಮೂಲಕ.

ಪ್ರತಿಯನ್ನು ಮಾಹಿತಿಗಾಗಿ:

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ. ಧಾರವಾಡ ಮತ್ತು ಕಲ್ಬುರ್ಗಿ ಇವರಿಗೆ ಅಗತ್ಯ ಕ್ರಮಕ್ಕಾಗಿ
2. ಜಂಟಿ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು.
3. ರಾಜ್ಯದ ವಿಭಾಗೀಯ ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಮೈಸೂರು, ಬೆಳಗಾವಿ ಕಲ್ಬುರ್ಗಿ ವಿಭಾಗ ಇವರುಗಳಿಗೆ.

## ನಮೂನೆ

### ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ನಿಯೋಜನೆಯ ತಃಖ್ತೆ

1. ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ವಿವರ

ಜಿಲ್ಲೆ,

| ಕ್ರಸಂ | ನಿಯೋಜನೆಯ ಮೇಲಿರುವ ಶಿಕ್ಷಕರ ಹೆಸರು ಮತ್ತು ಮೂಲ ಶಾಲೆಯ ವಿವರ. | ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಶಾಲೆ. | ನಿಯೋಜನೆಯ ಆದೇಶ ಸಂಖ್ಯೆ ಮತ್ತು ದಿನಾಂಕ | ನಿಯೋಜಿತ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ದಿನಾಂಕ | ಪ್ರಸ್ತುತ ಬಿಡುಗಡೆಗೊಳಿಸಿದ ದಿನಾಂಕ | ಷರಾ |
|---|---|---|---|---|---|---|
| 1 | | | | | | |
| | | | | | | |
| | | | | | | |

2. ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ವಿವರ

ಜಿಲ್ಲೆ:

| ಕ್ರಸಂ | ನಿಯೋಜನೆಯ ಮೇಲಿರುವ ಶಿಕ್ಷಕರ ಹೆಸರು ಮತ್ತು ಮೂಲ ಶಾಲೆಯ ವಿವರ. | ನಿಯೋಜನೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ ಶಾಲೆ. ತಾಲ್ಲೂಕು/ಜಿಲ್ಲೆ | ಬಿಡುಗಡೆ ಆದೇಶ ಸಂಖ್ಯೆ ದಿನಾಂಕ | ಮೂಲ ಶಾಲೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕ | ಷರಾ |
|---|---|---|---|---|---|
| | | | | | |
| | | | | | |
| | | | | | |

ಉಪನಿರ್ದೇಶಕರ ಸಹಿ
ಮತ್ತು ಮೊಹರು

ಸೂಚನೆ: ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಪ್ರತ್ಯೇಕ ನಮೂನೆಯಲ್ಲಿ ಮಾಹಿತಿ ಸಲ್ಲಿಸಿರುವುದು.